# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 435 (626) |
| ಮಾನ್ಯ ಸದಸ್ಯರ ಹೆಸರು | : | ಶ್ರೀ ಮಧು ಜಿ ಮಾದೇಗೌಡ |
| ಉತ್ತರಿಸುವ ದಿನಾಂಕ | : | 23-12-2022 |
| ಉತ್ತರಿಸುವ ಸಚಿವರು | : | ಸಮಾಜ ಕಲ್ಯಾಣ ಮತ್ತು ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ದೀನದಯಾಳ್ ಉಪಾಧ್ಯಾಯ ಸೌಹಾರ್ದ ವಿದ್ಯಾರ್ಥಿ ನಿಲಯಗಳನ್ನು ರಾಜ್ಯದ ಯಾವ ಯಾವ ಶೈಕ್ಷಣಿಕ ಜಿಲ್ಲೆಗಳಲ್ಲಿ ಆರಂಭಿಸಲಾಗುತ್ತಿದೆ; | ದೀನದಯಾಳ್ ಉಪಾಧ್ಯಾಯ ಸೌಹಾರ್ದ ವಿದ್ಯಾರ್ಥಿ ನಿಲಯಗಳನ್ನು ರಾಜ್ಯದ ಶೈಕ್ಷಣಿಕ ಕೇಂದ್ರಗಳಾದ ಮೈಸೂರು, ಮಂಗಳೂರು, ಬೆಳಗಾವಿ, ಹುಬ್ಬಳ್ಳಿ-ಧಾರವಾಡ ಹಾಗೂ ಕಲಬುರಗಿ ಜಿಲ್ಲೆಗಳಲ್ಲಿ ಆರಂಭಿಸಲಾಗುತ್ತಿದೆ. |
| ಆ) | ವಿದ್ಯಾರ್ಥಿ ನಿಲಯ ಸಮುಚ್ಚಯದ ಸಾಮರ್ಥ್ಯ ಎಷ್ಟು ನಿಲಯಗಳ ನಿರ್ಮಾಣಕ್ಕೆ ಎಷ್ಟು ಎಕರೆ ಜಮೀನನ್ನು ಗುರುತಿಸಲಾಗಿದೆ; (ವಿವರ ನೀಡುವುದು) | ಸದರಿ ವಿದ್ಯಾರ್ಥಿ ನಿಲಯ ಸಮುಚ್ಚಯವು 1000 ವಿದ್ಯಾರ್ಥಿಗಳ ಸಾಮರ್ಥ್ಯದ್ದಾಗಿದ್ದು, ಸದರಿ ಸಮುಚ್ಚಯ ನಿರ್ಮಾಣಕ್ಕಾಗಿ ಮೇಲ್ಕಂಡ ಸ್ಥಳಗಳಲ್ಲಿನ ವಿಶ್ವವಿದ್ಯಾಲಯದ ಆವರಣದಲ್ಲಿ ನಿವೇಶನವನ್ನು ಗುರುತಿಸಲಾಗಿದೆ. |

| ವಿಶ್ವವಿದ್ಯಾಲಯ | ಗುರುತಿಸಲಾದ ನಿವೇಶನದ ವಿಸ್ತೀರ್ಣ |
|---|---|
| ಮೈಸೂರು ವಿಶ್ವವಿದ್ಯಾಲಯ, ಮೈಸೂರು | 04 ಎಕರೆ |
| ಮಂಗಳೂರು ವಿಶ್ವವಿದ್ಯಾಲಯ, ಮಂಗಳೂರು | 08 ಎಕರೆ |
| ರಾಣಿಚೆನ್ನಮ್ಮ ವಿಶ್ವವಿದ್ಯಾಲಯ, ಬೆಳಗಾವಿ | 10 ಎಕರೆ |
| ಕರ್ನಾಟಕ ವಿಶ್ವವಿದ್ಯಾಲಯ, ಧಾರವಾಡ | 10 ಎಕರೆ |
| ಗುಲ್ಬರ್ಗಾ ವಿಶ್ವವಿದ್ಯಾಲಯ, ಕಲಬುರಗಿ | 05 ಎಕರೆ |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಇ) | ಪ್ರತಿ ವಿದ್ಯಾರ್ಥಿ ನಿಲಯ ಸಮುಚ್ಚಯ ನಿರ್ಮಾಣಕ್ಕೆ ಮೀಸಲಿಟ್ಟ ಹಾಗೂ ಬಿಡುಗಡೆ ಮಾಡಲಾದ ಅನುದಾನ ಎಷ್ಟು; ಯಾವ ಇಲಾಖೆಯ ಮೂಲಕ ನಿರ್ಮಾಣ ಕಾಮಗಾರಿಯನ್ನು ಕೈಗೊಳ್ಳಲಾಗುತ್ತಿದೆ; | ಪ್ರತಿ ವಿದ್ಯಾರ್ಥಿ ನಿಲಯದ ಸಮುಚ್ಚಯಕ್ಕೆ ರೂ.50.00 ಕೋಟಿಗಳಂತೆ ಒಟ್ಟು ರೂ.250.00 ಕೋಟಿಗಳ ಅಂದಾಜು ವೆಚ್ಚದಲ್ಲಿ ಲೋಕೋಪಯೋಗಿ ಇಲಾಖೆಯ ವತಿಯಿಂದ ಕೈಗೊಳ್ಳಲಾಗುತ್ತಿದ್ದು, ಸಮಾಜ ಕಲ್ಯಾಣ ಇಲಾಖೆಯ ವತಿಯಿಂದ ರೂ.63.00 ಕೋಟಿಗಳನ್ನು ಬಿಡುಗಡೆ ಮಾಡಲು ಕ್ರಮವಹಿಸಲಾಗುತ್ತಿದೆ. |

| | | |
|---|---|---|
| ಈ) | ಪ್ರಸ್ತುತ ಸದರಿ ವಿದ್ಯಾರ್ಥಿ ನಿಲಯ ಸಮುಚ್ಚಯ ನಿರ್ಮಾಣ ಕಾಮಗಾರಿ ಪ್ರಗತಿಯು ಯಾವ ಹಂತದಲ್ಲಿದೆ? | ಸದರಿ ವಿದ್ಯಾರ್ಥಿ ನಿಲಯಗಳ ಸಮುಚ್ಚಯ ನಿರ್ಮಾಣಕ್ಕೆ ಸಂಬಂಧಿಸಿದಂತೆ, ವಿಶ್ವವಿದ್ಯಾಲಯಗಳ ಆವರಣದಲ್ಲಿ ಗುರುತಿಸಲಾಗಿರುವ ನಿವೇಶನಗಳಲ್ಲಿ ಕಟ್ಟಡ ನಿರ್ಮಾಣ ಮಾಡಲು ಉನ್ನತ ಶಿಕ್ಷಣ ಇಲಾಖೆಯಿಂದ ಅನುಮೋದನೆ ನೀಡಿದ ನಂತರ, ಮಾದರಿ ನಕ್ಷೆ ಹಾಗೂ ವಿನ್ಯಾಸವನ್ನು ಅಂತಿಮಗೊಳಿಸಿ, ಕಾಮಗಾರಿಗಳನ್ನು ಶೀಘ್ರವಾಗಿ ಪ್ರಾರಂಭಿಸಲು ಕ್ರಮವಹಿಸಲಾಗುವುದು. |

**ಸಕಇ 777 ಎಸ್‌ಎಲ್ ಪಿ 2022**

**(ಕೋಟ ಶ್ರೀನಿವಾಸ ಪೂಜಾರಿ)**
**ಸಮಾಜ ಕಲ್ಯಾಣ ಹಾಗೂ**
**ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು**